ಕಾಲೇಜು ಶಿಕ್ಷಣ ಇಲಾಖೆ
ಕರ್ನಾಟಕ ಸರ್ಕಾರ
Department of Collegiate Education
Government of Karnataka

ಸಂಖ್ಯೆ: ಕಾಶಿಇ/ಮಾತಂವಿ/27/ಲ್ಯಾಪ್‌ಟಾಪ್/2017-18

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ: 13.10.2017

**ಸುತ್ತೋಲೆ**

ವಿಷಯ : ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪ.ಜಾ/ಪ.ಪಂಗಡದ ಪ್ರಥಮ ಪದವಿ ವಿದ್ಯಾರ್ಥಿಗಳಿಗೆ ಇ-ಕಂಟೆಂಟ್ ತುಂಬಿಸಿದ ಲ್ಯಾಪ್‌ಟಾಪ್‌ಗಳನ್ನು ಕಲಿಕಾ ಸಾಮಗ್ರಿಯಾಗಿ ಒದಗಿಸುವ ಬಗ್ಗೆ

ಉಲ್ಲೇಖ: 1. ಸರ್ಕಾರದ ಆದೇಶ ಸಂಖ್ಯೆ: ಇಡಿ 4 ಹೆಚ್‌ಪಿಸಿ 2017, ಬೆಂಗಳೂರು ದಿ. 18/02/2017, 21/03/2017, 27/03/2017.
2. ಈ ಕಛೇರಿ ಸುತ್ತೋಲೆ ಸಂಖ್ಯೆ: ಕಾಶಿಇ/ಮಾತಂವಿ/42/ಲ್ಯಾಪ್‌ಟಾಪ್/16-17 ದಿನಾಂಕ:04/04/2017, 05/08/2017, 11/10/2017

>>><<

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ, ಕುಟುಂಬದ ವಾರ್ಷಿಕ ವರಮಾನ ರೂ.2.50 ಲಕ್ಷಗಳಿಗಿಂತ ಕಡಿಮೆ ಇರುವ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಇ-ಕಂಟೆಂಟ್ ತುಂಬಿಸಿದ ಲ್ಯಾಪ್‌ಟಾಪ್‌ಗಳನ್ನು ಕಲಿಕಾ ಸಾಮಗ್ರಿಯಾಗಿ ಒದಗಿಸುವ ಬಗ್ಗೆ ಟೆಂಡರ್ ಪ್ರಕ್ರಿಯೆಗಳು ಪೂರ್ಣಗೊಂಡಿದ್ದು, ಲ್ಯಾಪ್‌ಟಾಪ್‌ಗಳ ಸರಬರಾಜಿಗೆ ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ.

ಕಾಲೇಜುಗಳಿಂದ ನೀಡಲಾಗುವ ಅರ್ಹ ವಿದ್ಯಾರ್ಥಿಗಳ ಸಂಖ್ಯೆಯ ಆಧಾರದ ಮೇಲೆ ಕಾಲೇಜುಗಳಿಗೆ ಲ್ಯಾಪ್‌ಟಾಪ್‌ಗಳನ್ನು ಸರಬರಾಜು ಮಾಡಲಾಗುವುದು. ಲ್ಯಾಪ್‌ಟಾಪ್‌ಗಳು ಸರಬರಾಜಾದ ನಂತರದಲ್ಲಿ ಹೆಚ್ಚುವರಿ ಲ್ಯಾಪ್‌ಟಾಪ್‌ಗಳನ್ನು ಸರಬರಾಜು ಮಾಡಲು ಅಥವಾ ಲ್ಯಾಪ್‌ಟಾಪ್‌ಗಳು ಹೆಚ್ಚುವರಿಯಾದಲ್ಲಿ ಅವುಗಳನ್ನು ವಾಪಸ್ಸು ಮಾಡಲು ಅವಕಾಶವಿರುವುದಿಲ್ಲ. ಆದ್ದರಿಂದ ಪ್ರಾಂಶುಪಾಲರುಗಳಿಂದ ಸರಿಯಾದ ಸಂಖ್ಯೆಯ ಮಾಹಿತಿಯನ್ನು ಪಡೆಯುವುದು ಅಗತ್ಯವಾಗಿರುತ್ತದೆ.

ಕಾಲೇಜುಗಳಿಂದ ನೀಡಲಾಗಿರುವ ಮಾಹಿತಿಯನುಸಾರವಾಗಿ, 2016-17ನೇ ಸಾಲಿನಲ್ಲಿ ಪದವಿ ಪ್ರಥಮ ವರ್ಷಕ್ಕೆ ಪ್ರವೇಶ ಪಡೆದು ಪ್ರಸ್ತುತ ಎರಡನೇ ವರ್ಷದ ಪದವಿ ತರಗತಿಗಳಲ್ಲಿ ವ್ಯಾಸಂಗ ಮಾಡುತ್ತಿರುವ ಹಾಗೂ ಕುಟುಂಬದ ವಾರ್ಷಿಕ ಆದಾಯ ರೂ.2.50 ಲಕ್ಷಗಳಿಗಿಂತ ಕಡಿಮೆ ಇರುವ ಅರ್ಹ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳ ಪಟ್ಟಿಯನ್ನು ದಿನಾಂಕ:11/10/2017ರಂದು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದ್ದು, ಅರ್ಹ ವಿದ್ಯಾರ್ಥಿಗಳ ಪಟ್ಟಿ ಸರಿಯಾಗಿರುವ ಬಗ್ಗೆ ಪರಿಶೀಲನೆಗೆ ಹಾಗೂ ಮಾಹಿತಿಗಳನ್ನು ಕೇಂದ್ರಕಛೇರಿಗೆ ಸಲ್ಲಿಸುವ ಬಗ್ಗೆ ವಿವರವಾದ ಸೂಚನೆಗಳನ್ನು ಎಲ್ಲಾ ಪ್ರಾಂಶುಪಾಲರುಗಳಿಗೆ ಸುತ್ತೋಲೆ ಹಾಗೂ **ಇಲಾಖೆಯ ವೆಬ್‌ಸೈಟ್** ಮೂಲಕ ನೀಡಲಾಗಿರುತ್ತದೆ.

ಸದರಿ ಸೂಚನೆಗಳನುಸಾರವಾಗಿ, ಅರ್ಹ ವಿದ್ಯಾರ್ಥಿಗಳ ಪಟ್ಟಿಯನ್ನು ಡೌನ್‌ಲೋಡ್ ಮಾಡಿಕೊಂಡು, ದಿ.11/10/2017 ರಿಂದ ದಿ:13/10/2017ರವರೆಗೆ ನೋಟಿಸ್ ಬೋರ್ಡನಲ್ಲಿ ಪ್ರದರ್ಶಿಸುವಂತೆ, ಈ ಬಗ್ಗೆ ಪ್ರತಿ ತರಗತಿಗಳಲ್ಲಿ ವಿದ್ಯಾರ್ಥಿಗಳಿಗೆ ಮಾಹಿತಿಯನ್ನು ನೀಡುವಂತೆ ಮತ್ತು ದಿನಾಂಕ:14/10/2017 ರಂದು ದಾಖಲಾತಿಗಳನ್ನು ಪರಿಶೀಲಿಸಿ ಅರ್ಹ ವಿದ್ಯಾರ್ಥಿಗಳ ಪಟ್ಟಿಯನ್ನು ಪರಿಷ್ಕರಿಸಿ ಸಿದ್ಧಪಡಿಸಿಕೊಳ್ಳುವಂತೆ ಪ್ರಾಂಶುಪಾಲರುಗಳಿಗೆ ತಿಳಿಸಲಾಗಿದೆ.

ದಿನಾಂಕ: 16/10/2017 ಮತ್ತು ದಿನಾಂಕ:17/10/2017ರಂದು ಇಎಂಐಎಸ್ ತಂತ್ರಾಂಶದಲ್ಲಿ ನೀಡಲಾಗುವ 'ಲಿಂಕ್'ನಲ್ಲಿ ಸಿದ್ಧಪಡಿಸಿಟ್ಟುಕೊಂಡಿರುವ ಪರಿಷ್ಕೃತ ವಿದ್ಯಾರ್ಥಿಗಳ ಪಟ್ಟಿಯನುಸಾರವಾಗಿ ಮಾಹಿತಿಗಳನ್ನು 'ಅಪ್‌ಡೇಟ್' ಮಾಡುವಂತೆ ಸೂಚಿಸಲಾಗಿದೆ.

ಈ ಹಿನ್ನಲೆಯಲ್ಲಿ ತಮ್ಮ ಕಛೇರಿಯ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ಮಾಹಿತಿಗಳನ್ನು ನೋಟೀಸ್‌ಬೋರ್ಡನಲ್ಲಿ ಪ್ರದರ್ಶಿಸಲಾಗುತ್ತಿದೆ, ವಿದ್ಯಾರ್ಥಿಗಳಿಂದ ಮಾಹಿತಿಗಳನ್ನು ಪಡೆಯಲಾಗುತ್ತಿದೆ ಹಾಗೂ ಪರಿಷ್ಕೃತ ಮಾಹಿತಿಗಳನ್ನು ದಿ.16/10/2017 ಹಾಗೂ 17/10/2017ರಲ್ಲಿ ಇಎಂಐಎಸ್ ತಂತ್ರಾಂಶದಲ್ಲಿ ಅಳವಡಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಪ್ರಾಂಶುಪಾಲರುಗಳೊಂದಿಗೆ ನಿರಂತರ ಸಂಪರ್ಕದಲ್ಲಿದ್ದು ಖಚಿತಪಡಿಸಿಕೊಳ್ಳುವಂತೆ ಸೂಚಿಸಲಾಗಿದೆ. ಹಾಗೂ ದಿನಾಂಕ: 17/10/2017ರಂದು ತಮ್ಮ ಕಛೇರಿ

ವ್ಯಾಪ್ತಿಯ ಎಲ್ಲಾ ಸರ್ಕಾರಿ ಕಾಲೇಜುಗಳ ಪ್ರಾಂಶುಪಾಲರುಗಳಿಂದ ಅರ್ಹ ವಿದ್ಯಾರ್ಥಿಗಳ ಧೃಢೀಕೃತ ಪಟ್ಟಿಯನ್ನು ಪಡೆದು, ದಿನಾಂಕ:19/10/2017ರಂದು ಕೇಂದ್ರ ಕಛೇರಿಯ ಮಾಹಿತಿ ಮತ್ತು ತಂತ್ರಜ್ಞಾನ ವಿಭಾಗಕ್ಕೆ ಖುದ್ದಾಗಿ ತಲುಪಿಸುವಂತೆ ಸೂಚಿಸಲಾಗಿದೆ. ಈ ಸಂಬಂಧದಲ್ಲಿ ಯಾವುದೇ ವಿಳಂಬಕ್ಕೆ ಆಸ್ಪದ ಇರುವುದಿಲ್ಲವೆಂಬ ಅಂಶವನ್ನು ಪ್ರಾಂಶುಪಾಲರುಗಳಿಗೆ ಮನದಟ್ಟು ಮಾಡುವಂತೆ ಸೂಚಿಸಲಾಗಿದೆ.

ದಿ.16/10/2017ರಂದು ಬೆಳಗ್ಗೆ 9.00 ಗಂಟೆಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ಎಲ್ಲಾ ಪ್ರಾಂಶುಪಾಲರುಗಳಿಗೆ ಈ ಸಂಬಂಧದಲ್ಲಿ ಮಾಹಿತಿಯನ್ನು ನೀಡಲಾಗುತ್ತಿದ್ದು, ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರುಗಳು ತಮ್ಮ ಕಛೇರಿಯಲ್ಲಿರುವ ಸಮನ್ವಯಾಧಿಕಾರಿಗಳೊಂದಿಗೆ ಸಂಬಂಧಪಟ್ಟ ಜಿಲ್ಲೆಯ ಜಿಲ್ಲಾಧಿಕಾರಿಗಳ ಕಛೇರಿಯಲ್ಲಿರುವ KSWAN Video Conference Facility ಮೂಲಕ ವಿಡಿಯೋ ಕಾನ್ಫರೆನ್ಸ್‌ನಲ್ಲಿ ಭಾಗವಹಿಸುವಂತೆ ಸೂಚಿಸಲಾಗಿದೆ.

ಕಾಲೇಜು ಶಿಕ್ಷಣ ಆಯುಕ್ತರು

ಇವರಿಗೆ,

ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಮಂಗಳೂರು, ಧಾರವಾಡ, ಶಿವಮೊಗ್ಗ ಮತ್ತು ಗುಲ್ಬರ್ಗಾ- ಮಾಹಿತಿಗಾಗಿ

ಪ್ರತಿಯನ್ನು,

1. ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಗೆ ಒಳಪಡುವ ಎಲ್ಲಾ ಸರ್ಕಾರಿ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ- ಮಾಹಿತಿ ಮತ್ತು ಸೂಕ್ತ ಕ್ರಮಕ್ಕಾಗಿ
2. ಕಾಲೇಜು ಶಿಕ್ಷಣ ಆಯುಕ್ತರ/ನಿರ್ದೇಶಕರ/ಮುಖ್ಯ ಆಡಳಿತಾಧಿಕಾರಿಗಳ/ಹೆಚ್ಚುವರಿ ನಿರ್ದೇಶಕರ ಆಪ್ತ ಶಾಖೆಗೆ-ಮಾಹಿತಿಗಾಗಿ
3. ಕಛೇರಿ ಪ್ರತಿ.